15 ಡಿಸೆಂಬರ್ 2022 (71)
4RK
0711

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಪುಟ್ಟಣ್ಣ(ಬೆಂಗಳೂರು ಶಿಕ್ಷಕರ ಕ್ಷೇತ್ರ) ಇವರು ನಿಯಮ-72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ;**

* * * * * * * *

**ವಿಷಯ:** ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಾಗೂ ವಿಶ್ವವಿದ್ಯಾಲಯಗಳಲ್ಲಿ 15, 20 ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿ ಸುಮಾರು 12000 ಕ್ಕೂ ಹೆಚ್ಚು ಮಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸದರಿಯವರು ಬಹಳ ಕಡಿಮೆ ವೇತನದಲ್ಲಿ ಸೇವಾ ಭದ್ರತೆ, ರಜೆ ಇನ್ನಿತರೆ ಯಾವುದೇ ಸೌಲಭ್ಯಗಳನ್ನು ನೀಡದೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಪ್ರತಿ ವರ್ಷ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳುವಾಗ ಹಲವಾರು ಗೊಂದಲಗಳಾಗುತ್ತಿದ್ದು, ಕೆಲವರಿಗೆ ಉದ್ಯೋಗವಿಲ್ಲದೆ ನಿರುದ್ಯೋಗಿಗಳಾಗಿ ಬೀದಿ ಪಾಲಾಗುತ್ತಿದ್ದಾರೆ. ಅತಿಥಿ ಉಪನ್ಯಾಸಕರಲ್ಲಿ ಹಲವರಿಗೆ ಈಗಾಗಲೇ ವಯೋಮಿತಿ ಮೀರಿದ್ದು, ಬೇರೆ ಯಾವ ಸರ್ಕಾರಿ ಕೆಲಸಕ್ಕೆ ಸೇರಲು ಆಗುತ್ತಿಲ್ಲ. ಸರ್ಕಾರವು ನೀಡುತ್ತಿರುವ ವೇತನವು ಇವರ ಜೀವನ ನಡೆಸಲು ಸಾಧ್ಯವಾಗದಂತಹ ಪರಿಸ್ಥಿತಿ ಇದೆ. ಆದ್ದರಿಂದ ಸರ್ಕಾರಿ ಪದವಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಯು.ಜಿ.ಸಿ. ನಿಗಧಿಗೊಳಿಸಿರುವ ವೇತನ ನೀಡುವಂತೆ, ಸೇವಾ ಭದ್ರತೆ, ಹೆರಿಗೆ ರಜೆ ಹಾಗೂ ಮುಷ್ಕರದ ಅವಧಿಯ ವೇತನ ಸೇರಿದಂತೆ ಇನ್ನಿತರೆ ಸಮಸ್ಯೆಗಳನ್ನು ಬಗೆಹರಿಸಬೇಕೆಂಬ ವಿಷಯ.

**ಉತ್ತರ:**

- ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ:18-12-2003ರಲ್ಲಿ ಖಾಯಂ ಉಪನ್ಯಾಸಕರಿಗೆ ನಿಗದಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು, ಅರೆಕಾಲಿಕ ಉಪನ್ಯಾಸಕರ ಬದಲಿಗೆ, ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು.

- ಖಾಯಂ ಉಪನ್ಯಾಸಕರಿಗೆ ವಾರಕ್ಕೆ 16/20 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿದ್ದು, ಅತಿಥಿ ಉಪನ್ಯಾಸಕರಿಗೆ ಅದರಲ್ಲಿ ಅರ್ಧದಷ್ಟು ಅಂದರೆ ಗರಿಷ್ಠ 8/10 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿತ್ತು.

- ಅತಿಥಿ ಉಪನ್ಯಾಸಕರಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿದವರಿಗೆ ರೂ.13,000/- ಹಾಗೂ ಯು.ಜಿ.ಸಿ. ವಿದ್ಯಾರ್ಹತೆ ಇಲ್ಲದವರಿಗೆ ರೂ.11,000/-ಗಳ ಗೌರವಧನವನ್ನು ನಿಗಧಿಪಡಿಸಲಾಗಿತ್ತು.

- 2021ರಲ್ಲಿ ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳ ಹಾಗೂ ಇತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ, ವಿವರವಾದ ಅಧ್ಯಯನ ನಡೆಸಿ, ವಿಸ್ತøತ ವರದಿಯನ್ನು ಸಲ್ಲಿಸಲು ಸರ್ಕಾರವು ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿತ್ತು.

- ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯು ಅತಿಥಿ ಉಪನ್ಯಾಸಕರ ವಿವಿಧ ಬೇಡಿಕೆಗಳನ್ನು ಕಾನೂನಾತ್ಮಕವಾಗಿ, ಆಡಳಿತಾತ್ಮಕವಾಗಿ ಮತ್ತು ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ಪರಿಶೀಲಿಸಿ, ಸರ್ಕಾರಕ್ಕೆ ವಿಸ್ತøತ ವರದಿಯನ್ನು ಸಲ್ಲಿಸಿತ್ತು.

- ಸದರಿ ವರದಿಯನ್ನು ಪರಿಶೀಲಿಸಿದ ಸರ್ಕಾರವು ಹೊರಡಿಸಿದ ಆದೇಶ ಸಂಖ್ಯೆ:ಇಡಿ 242 ಡಿಸಿಇ 2021, ದಿನಾಂಕ:14.01.2022 & 24.01.2022ರಲ್ಲಿ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ 15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಈ ಕೆಳಗಿನಂತೆ ಹೆಚ್ಚಿಸಲಾಗಿತ್ತು.

  ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)

  ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)

ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)

ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ)

- ತದನಂತರ, ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಡಿಸಿಇ 2024 (ಇ), ದಿನಾಂಕ:04-03-2024 ರಂತೆ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ಪಾವತಿಸಲಾಗುತ್ತಿರುವ ಗೌರವಧನವನ್ನು ಅವರುಗಳ ಸೇವಾ ಅವಧಿಯ ಆಧಾರದ ಮೇಲೆ ರೂ.5,000/- ರಿಂದ ರೂ.8,000/- ದವರೆಗೆ ಹೆಚ್ಚಿಸಿ, ಈ ಕೆಳಕಂಡಂತೆ ಪರಿಷ್ಕರಿಸಲಾಗಿದೆ.

| ಕ್ರ ಸಂ | ಸೇವಾವಧಿ ಮತ್ತು ವಿದ್ಯಾರ್ಹತೆ | ಗೌರವಧನದ ಮೊತ್ತ | ಪರಿಷ್ಕರಿಸಿದ ಗೌರವಧನದ ಮೊತ್ತ | ಒಟ್ಟು ಗೌರವಧನದ ಮೊತ್ತ |
|---|---|---|---|---|
| 1 | 5 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 30,000/- | 5,000/- | 35,000/- |
| 2 | 5 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 26,000/- | 5,000/- | 31,000/- |
| 3 | 5 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 10 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 32,000/- | 6,000/- | 38,000/- |
| 4 | 5 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 10 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 28,000/- | 6,000/- | 34,000/- |
| 5 | 10 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 15 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 32,000/- | 7,000/- | 39,000/- |
| 6 | 10 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 15 ವರ್ಷಕ್ಕಿಂತ ಕಡಿಮೆ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 28,000/- | 7,000/- | 35,000/- |
| 7 | 15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | 32,000/- | 8,000/- | 40,000/- |
| 8 | 15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಸೇವಾವಧಿ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ | 28,000/- | 8,000/- | 36,000/- |

- ಅತಿಥಿ ಉಪನ್ಯಾಸಕರನ್ನು ಸೆಮಿಸ್ಟರ್ ಬದಲಾಗಿ, ಶೈಕ್ಷಣಿಕ ವರ್ಷಕ್ಕೆ (10 ತಿಂಗಳಿಗೆ ಮಾತ್ರ) ನೇಮಕ ಮಾಡಿಕೊಳ್ಳಲಾಗುತ್ತಿದೆ.
- ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗಿದೆ.

- ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಲಭ್ಯವಾಗುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಕೇಂದ್ರಿಕೃತ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ರಾಜ್ಯವ್ಯಾಪಿ ಮೆರಿಟ್/ಆಯ್ಕೆಪಟ್ಟಿ ಸಿದ್ಧಪಡಿಸಲಾಗುತ್ತಿದ್ದು, ಅದರನ್ವಯ ಅಭ್ಯರ್ಥಿಗಳು ತಮಗೆ ಬೇಕಾಗಿರುವ ಸ್ಥಳ/ಕಾಲೇಜು ಆಯ್ಕೆ ಮಾಡಿಕೊಳ್ಳಲು ಮುಕ್ತ ಅವಕಾಶ ನೀಡಲಾಗಿದೆ. ಅದರನ್ವಯ ಆನ್‌ಲೈನ್

ಕೌನ್ಸಿಲಿಂಗ್‌ನಲ್ಲಿ ಸ್ಥಳ/ಕಾಲೇಜು ಆಯ್ಕೆ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರು ಸಂಬಂಧಪಟ್ಟ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸಬಹುದಾಗಿದೆ.

- ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಡಿಸಿಇ 2024 (ಇ), ದಿನಾಂಕ:04-03-2024 ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳಾಗಿ ಸೇವೆ ಸಲ್ಲಿಸಿದ 60 ವರ್ಷ ಮೀರಿದ ಅತಿಥಿ ಉಪನ್ಯಾಸಕರುಗಳಿಗೆ ಭದ್ರತಾ ರೂಪದಲ್ಲಿ ವಾರ್ಷಿಕ ರೂ.50,000/- ದಂತೆ ಗರಿಷ್ಠ 5.00 ಲಕ್ಷಗಳ ಮೊತ್ತದ ಇಡಿಗಂಟಿನ ಸೌಲಭ್ಯವನ್ನು ನೀಡಲು ಮಂಜೂರಾತಿ ನೀಡಿದೆ.

- ಅತಿಥಿ ಉಪನ್ಯಾಸಕರ ಆರೋಗ್ಯ ದೃಷ್ಟಿಯಿಂದ ವಾರ್ಷಿಕ ರೂ.5.00 ಲಕ್ಷಗಳ ಆರೋಗ್ಯ ವಿಮಾ ಸೌಲಭ್ಯವನ್ನು ನೀಡುವ ನಿಟ್ಟಿನಲ್ಲಿ (ಅತಿಥಿ ಉಪನ್ಯಾಸಕರಿಂದ ವಂತಿಗೆ ರೂಪದಲ್ಲಿ ಮಾಸಿಕ ರೂ.400 + ಸರ್ಕಾರದಿಂದ ರೂ.400 ಒಟ್ಟು ರೂ.800/-) ಆರೋಗ್ಯ ವಿಮಾ ಸೌಲಭ್ಯವನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

- ಆದರೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ: ಆಕುಕ 324 ಸಿಜಿಇ 2025, ದಿನಾಂಕ:24.06.2025 ರಲ್ಲಿ "ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ, ಹೊರಗುತ್ತಿಗೆ ಹಾಗೂ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ 03 ಲಕ್ಷಕ್ಕೂ ಅಧಿಕ ಸಿಬ್ಬಂದಿ ವರ್ಗ ಹಾಗೂ ಅವಲಂಬಿತರಿಗೆ 5 ಲಕ್ಷ ರೂ. ವರೆಗೆ ನಗದು ರಹಿತ ಚಿಕಿತ್ಸೆ ನೀಡಲು ಯೋಜನೆ ರೂಪಿಸಲಾಗಿದ್ದು, ಸಿಬ್ಬಂದಿಯ ವೈಯಕ್ತಿಕ ಮಾಸಿಕ ವಂತಿಕೆ 100 ರೂ. ಮತ್ತು ಸರ್ಕಾರದ ಮಾಸಿಕ ವಂತಿಕೆ 200 ರೂ. ಗಳೊಂದಿಗೆ ಸುವರ್ಣ ಆರೋಗ್ಯ ಟ್ರಸ್ಟ್ ಮೂಲಕ ಅನುಷ್ಠಾನಗೊಳಿಸುವ ಸಂಬಂಧ ನೌಕರರಿಂದ ಮಾಸಿಕ ಕೊಡುಗೆ ಮತ್ತು ಬಾಕಿ ಉಳಿದ ಹಣವನ್ನು ರಾಜ್ಯ ಇಲಾಖೆಯಿಂದ ಪಾವತಿಸಲು ಅನುಮೋದನೆ ನೀಡಿ ಆದೇಶಿಸಲಾಗಿದೆ." ಸದರಿ ಯೋಜನೆಯ ವ್ಯಾಪ್ತಿಗೆ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಗೌರವಧನದ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೂ ಒಳಪಡಲಿದ್ದು, ಈ ಯೋಜನೆಯ ಸಾಧಕ-ಬಾಧಕಗಳ ಬಗ್ಗೆ ಪರಿಶೀಲಿಸಿ, ಸದರಿ ಯೋಜನೆಯನ್ನು ಅತಿಥಿ ಉಪನ್ಯಾಸಕರಿಗೆ ಅನುಷ್ಠಾನಗೊಳಿಸುವ ಬಗ್ಗೆ ಕ್ರಮವಹಿಸಲಾಗುತ್ತಿದೆ.

- ಸರ್ಕಾರದ ಆದೇಶ ಸಂಖ್ಯೆ: ಇಡಿ 36 ಡಿಸಿಇ 2024 (ಇ), ದಿನಾಂಕ:14-03-2024 ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 15/19 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರಿಗೆ 01 ದಿನ ಸಾಂದರ್ಭಿಕ ರಜೆಯನ್ನು, ಸದರಿ 01 ದಿನದ ಕಾರ್ಯಭಾರವನ್ನು ಇತರೆ ದಿನಗಳಲ್ಲಿ ಸರಿದೂಗಿಸಿಕೊಳ್ಳುವ ಷರತ್ತಿಗೆ ಒಳಪಟ್ಟು ಮಂಜೂರು ಮಾಡಿ ಆದೇಶಿಸಲಾಗಿರುತ್ತದೆ.

- **ವಿಶ್ವವಿದ್ಯಾಲಯಗಳು** ಸರ್ಕಾರದಿಂದ ಮಂಜೂರಾಗಿರುವ ಹುದ್ದೆಗಳಲ್ಲಿ ಖಾಲಿ ಹುದ್ದೆಗಳಿಗೆ ಎದುರಾಗಿ ತಮ್ಮ ಆಂತರಿಕ ಸಂಪನ್ಮೂಲದಿಂದ ಲಭ್ಯತೆಗೆ ಅನುಗುಣವಾಗಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡು ಶೈಕ್ಷಣಿಕ ಚಟುವಟಿಕೆಗಳನ್ನು ನಿರ್ವಹಿಸುತ್ತಿರುತ್ತವೆ.

- ವಿಶ್ವವಿದ್ಯಾಲಯಗಳು ದಿನಾಂಕ:28.01.2019ರಂದು ಯುಜಿಸಿಯು ಹೊರಡಿಸಿರುವ ಮಾರ್ಗಸೂಚಿಯಲ್ಲಿ ತಿಳಿಸಲಾದಂತೆ ಪ್ರತಿ ಉಪನ್ಯಾಸಕ್ಕೆ ರೂ.1500/-ರಂತೆ ಪ್ರತಿ ತಿಂಗಳಿಗೆ ಗರಿಷ್ಟ ರೂ.50,000/- ಗಳು ಮೀರದಂತೆ ಗೌರವ ಧನವನ್ನು ನಿಗಧಿಪಡಿಸಲಾಗಿರುತ್ತದೆ.

**ಸಂಖ್ಯೆ: ಇಡಿ 324 ಡಿಸಿಇ 2025(ಇ)**

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು